# ಕರ್ನಾಟಕ ಸರ್ಕಾರದ ನಡವಳಗಳು.

**ವಿಷಯ:-** ಶ್ರೀ ಎಂ.ಕೆ.ವಾಳ್ವೇಕರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ತುರವೇಕೆರೆ ಇವರ ವಿರುದ್ಧದ ಶಿಸ್ತು ಕ್ರಮ – ಅಂತಿಮ ಆದೇಶ.

**ಓದಲಾಗಿದೆ:** 1 ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 233 ವಿಸೇಜಿ 2015 ದಿ:16-11-2015.
2. ಶ್ರೀ ಎಂ.ಕೆ.ವಾಳ್ವೇಕರ್ ಇವರ ಲಿಖಿತ ಹೇಳಿಕೆ ದಿ: 08-12-2015.

------

**ಪ್ರಸ್ತಾವನೆ:-**

ಶ್ರೀ ಎಂ.ಕೆ.ವಾಳ್ವೇಕರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ತುರವೇಕೆರೆ (ಪ್ರಸ್ತುತ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸ್ಥಳ ನಿರೀಕ್ಷಣೆಯಲ್ಲಿ) ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿರುವ ಕರ್ತವ್ಯಲೋಪ/ದುರ್ನಡತೆಯ ಆರೋಪಗಳ ಕುರಿತಂತೆ ಶಿಸ್ತುಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ಇವರು ದಿನಾಂಕ: 14.09.2015ರ ಪತ್ರದೊಂದಿಗೆ ದೋಷಾರೋಪಣಪಟ್ಟಿಯನ್ನು ಸಲ್ಲಿಸಿರುತ್ತಾರೆ. ಅದರನ್ವಯ ಸದರಿ ಅಧಿಕಾರಿಯವರಿಗೆ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 12(1)(ಎ) ಪ್ರಕಾರ ದಿನಾಂಕ 24.11.2015ರಂದು ಜಾರಿ ಮಾಡಲಾಗಿರುತ್ತದೆ. ಸದರಿ ಆರೋಪಗಳು ಈ ಕೆಳಕಂಡಂತಿರುತ್ತವೆ.

1. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 148 ಮತ್ತು 149ರ ಪ್ರಕಾರ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಕ್ರಿಯಾ ಯೋಜನೆಗ ಳನ್ನು ತಯಾರಿಸಲು ವಿಷಯಗಳನ್ನು ಸಿದ್ದಪಡಿಸಿ ತಾಲ್ಲೂಕು ಪಂಚಾಯತ್ ಸಾಮಾನ್ಯ ಸ್ಥಾಯಿ ಸಮಿತಿ, ಹಣಕಾಸು ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ, ಹಾಗೂ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಗಳಲ್ಲಿ ಚರ್ಚೆಗೆ ಮಂಡಿಸಿ ವಿಷಯಗಳ ಮೇಲೆ ನಿರ್ಣಯ ಕೈಗೊಂಡಿರುವುದಿಲ್ಲದ ಕಾರಣ ತಾಲ್ಲೂಕಿನಲ್ಲಿ ಸರ್ಕಾರದ ಕೆಲಸ ಕಾರ್ಯಗಳು ಸ್ಥಗಿತಗೊಳ್ಳಲು ಹಾಗೂ ಜನಪರ ಕಾರ್ಯಕ್ರಮಗಳ ಅನುಮೋದನೆಗೆ ಅವಕಾಶ ಮಾಡಿಕೊಡದೆ ಇರುವುದು.
2. ದಿ:02.06.2014ರಂದು ತಾಲ್ಲೂಕು ಪಂಚಾಯತ್ ಸಾಮಾನ್ಯ ಸಭೆ ನಿಗಧಿಪಡಿಸಿ ಸಾಕಷ್ಟು ಕಾಲಾವಕಾಶ ನೀಡದೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ ಪ್ರಕರಣ 141 (ಬಿ) ಪ್ರಕಾರ ಪೂರ್ಣ 10 ದಿನಗಳಿಗೆ ಮೊದಲೇ ಸಭಾ ಸೂಚನಾ ಪತ್ರಗಳನ್ನು ಸಂಬಂಧಪಟ್ಟ ಜನಪ್ರತಿನಿಧಿಗಳಿಗೆ ತಲುಪಿಸಲು ಕ್ರಮಕೈಗೊಳ್ಳಬೇಕಾಗಿತ್ತು. ಸದರಿ ಸಭಾ ಸೂಚನಾ ಪತ್ರಗಳನ್ನು ಕೇವಲ ಎರಡು ದಿನ ಮೊದಲು ಹೊರಡಿಸಲಾಗಿದೆ. ಇದು ಮೇಲ್ಕಂಡ ಅಧಿನಿಯಮದ ಸಂಪೂರ್ಣ ಉಲ್ಲಂಘನೆಯಾಗಿರುತ್ತದೆ.
3. ದಿ:06.06.2014ರಂದು ನಡೆದ ಸಾಮಾನ್ಯ ಸಭೆಗೆ ಕೇವಲ 12 ಜನ ಸದಸ್ಯರು ಮಾತ್ರ ಹಾಜರಾಗಿರುತ್ತಾರೆ. 13ಜನ ಸದಸ್ಯರ ಹಾಜರಾತಿ ಅಗತ್ಯ ಇದ್ದರೂ ಕೂಡಾ ನೀವು ಸಾಮಾನ್ಯ ಸಭೆಯನ್ನು ಮುಂದೂಡದೆ ಕಲಾಪಗಳನ್ನು ನಡೆಸಲು ಹಾಗೂ ಸಭಾ ನಿರ್ಣಯಗಳನ್ನು ಕೈಗೊಳ್ಳಲು ಅವಕಾಶ ಮಾಡಿಕೊಟ್ಟಿರುತ್ತಾರೆ. ಇದು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ ಪ್ರಕರಣ 141(ಸಿ)ಯ ಸ್ಪಷ್ಟ ಉಲ್ಲಂಘನೆಯಾಗಿರುತ್ತದೆ.
4. ದಿ:06.06.2014 ರಂದು ನಡೆದ ತಾಲ್ಲೂಕು ಪಂಚಾಯತ್ ಸಾಮಾನ್ಯ ಸಭೆಗೆ ರಾಜ್ಯ ವಿಧಾನ ಪರಿಷತ್ ಸದಸ್ಯರಿಗೆ ಸಭಾ ಸೂಚನಾ ಪತ್ರ ಕಳುಹಿಸದೆ ಕರ್ತವ್ಯ ನಿರ್ಲಕ್ಷತೆ, ಎಸಗಿ ದುರ್ನಡತೆ ತೋರಿರುವುದು.
5. ದಿ:20.05.2014 ರಿಂದ 20.06.2014 ರವರೆಗೆ ಕರ್ನಾಟಕ ವಿಧಾನ ಪರಿಷತ್ ಚುನಾವಣಾ ಸಂಬಂಧ, ಚುನಾವಣಾ ಮಾದರಿ ನೀತಿ ಸಂಹಿತೆಯು ಜಾರಿಯಲ್ಲಿದ್ದಾಗ್ಯೂ ಕೂಡಾ ಅದನ್ನು ಲೆಕ್ಕಿಸದೆ ದಿ:06.06.2014ರಂದು ಸಾಮಾನ್ಯ ಸಭೆಯನ್ನು ಕರೆದು ಸಭೆ ನಡೆಸಿರುವುದು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಶ್ರೀ ಎಂ.ಕೆ.ವಾಳ್ವೇಕರ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ತುರವೇಕೆರೆ (ಪ್ರಸ್ತುತ ಕಾರ್ಯಪಾಲಕ ಇಂಜಿನೀಯರ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸ್ಥಳ ನಿರೀಕ್ಷಣೆಯಲ್ಲಿ) ಇವರು ದಿನಾಂಕ: 08-12-2015 ರಂದು ಈ ಕೆಳಕಂಡಂತೆ ಲಿಖಿತ ಹೇಳಿಕೆಯನ್ನು ಸಲ್ಲಿಸಿರುತ್ತಾರೆ.

GO

1. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 148 ಮತ್ತು 149ರ ಪ್ರಕಾರ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಕ್ರಿಯಾ ಯೋಜನೆಯನ್ನು ತಯಾರಿಸಲು ವಿಷಯ ಗಳನ್ನು ಸಿದ್ದುಪಡಿಸಿ ತಾಲ್ಲೂಕು ಪಂಚಾಯತ್ ಸ್ಥಾಯಿ ಸಮಿತಿ, ಹಣಕಾಸು ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಹಾಗೂ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಗಳಲ್ಲಿ ಚರ್ಚೆಗೆ ಮಂಡಿಸಿ ವಿಷಯಗಳ ಮೇಲೆ ನಿರ್ಣಯ ಕೈಗೊಳ್ಳಲಾಗಿರುತ್ತದೆ. ಸರ್ಕಾರದ ಆದೇಶಗಳನ್ವಯ ಮತ್ತು ಮೇಲಾಧಿಕಾರಿಗಳ ಆದೇಶಗಳನ್ವಯ ತಾಲ್ಲೂಕು ಪಂಚಾಯತ್‌ನಲ್ಲಿ ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದ್ದು, ಯಾವುದೇ ಉದಾಸೀನ ತೋರಿಸದೆ ಅನುಷ್ಠಾನಗೊಳಿಸಿದ್ದು, ಜನಪರ ಕಾರ್ಯಕ್ರಮಗಳ ಅನುಮೋದನೆಗೆ ಅವಕಾಶ ಮಾಡಿಕೊಟ್ಟಿದ್ದು, ಸರ್ಕಾರದ ಉದ್ದೇಶಿತ ಎಲ್ಲಾ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗಿದ್ದು, ಯಾವುದೇ ರೀತಿಯ ಕರ್ತವ್ಯಲೋಪ ಎಸಗಿರುವುದಿಲ್ಲವೆಂದು ತಮ್ಮ ವಿರುದ್ಧದ ಆರೋಪವನ್ನು ಕೈಬಿಡಬೇಕೆಂದು ಕೋರಿರುತ್ತಾರೆ.
2. ತಾಲ್ಲೂಕು ಪಂಚಾಯತ್ ಅಧ್ಯಕ್ಷರ ಆದೇಶದಂತೆ ದಿ:02.06.2014ರಂದು ತಾಲ್ಲೂಕು ಪಂಚಾಯತ್ ಸಾಮಾನ್ಯ ಸಭೆ ನಿಗದಿಪಡಿಸಿದ್ದು, ಕೋರಂ ಅಭಾವವಿದ್ದುದ್ದರಿಂದ ತಾಲ್ಲೂಕು ಪಂಚಾಯತಿಯ ಸಾಮಾನ್ಯ ಸಭೆಯನ್ನು ದಿ: 06.06.2014ರಂದು ನಿಗಧಿಪಡಿಸಿದ್ದು, ಸಾಮಾನ್ಯ ಸಭೆಯ ಸಭಾ ಸೂಚನೆಯನ್ನು ಸಂಬಂಧಪಟ್ಟವರೆಗೆಲ್ಲ ಮದ್ದಾಂ ತಲುಪಿಸಿದ್ದು, ತಾಲ್ಲೂಕು ಪಂಚಾಯತ್ ಕಛೇರಿಯಲ್ಲಿ ಅಂಟಿಸಲಾಗಿರುತ್ತದೆ. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದ ಪತ್ರಗಳನ್ವಯ ಸಭೆ ಕರೆಯಲಾಗಿದ್ದು, ಯಾವುದೇ ಕರ್ತವ್ಯಲೋಪ ಎಸಗಿರುವುದಿಲ್ಲ. ಆದ್ದರಿಂದ ಎರಡನೆಯ ಆರೋಪವನ್ನು ಕೈಬಿಡಬೇಕೆಂದು ಕೋರಿರುತ್ತಾರೆ.
3. ದಿ:06.06.2014ರಂದು ನಡೆದ ಸಾಮಾನ್ಯ ಸಭೆಯಲ್ಲಿ ಒಟ್ಟು 16 ಜನ ಸದಸ್ಯರು ಹಾಜರಿದ್ದುದ್ದರಿಂದ ಕಲಾಪಗಳನ್ನು ನಡೆಸಿ ಸಭಾ ನಿರ್ಣಯವನ್ನು ಕೈಗೊಳ್ಳಲಾಗಿರುತ್ತದೆ. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ ಪ್ರಕರಣ 141(ಸಿ) ರನ್ವಯ ತಾಲ್ಲೂಕು ಪಂಚಾಯತಿಯ ಸಭೆಯಲ್ಲಿ ಕೋರಂ ಇದ್ದುದ್ದರಿಂದ ಸಭೆಯ ಕಾರ್ಯ ಕಲಾಪವನ್ನು ನಿರ್ವಹಿಸಲಾಗಿದ್ದು, ಯಾವುದೇ ರೀತಿಯ ಕರ್ತವ್ಯಲೋಪ ಎಸಗಿರು ವುದಿಲ್ಲವೆಂದು ತಮ್ಮ ವಿರುದ್ಧದ ಮೂರನೇ ಆರೋಪ ಕೈಬಿಡಬೇಕೆಂದು ಕೋರಿರುತ್ತಾರೆ.
4. ದಿ:06.06.2014ರಂದು ನಡೆಯುವ ತಾಲ್ಲೂಕು ಪಂಚಾಯತ್ ಸಾಮಾನ್ಯ ಸಭೆಗೆ ದಿ: 22.05.2014 ಮತ್ತು 04.06.2014ರ ದಿನಾಂಕಗಳ ಸಭಾ ಸೂಚನಾ ಪತ್ರದಲ್ಲಿ ಕೈತಪ್ಪಿನಿಂದಾಗಿ ರಾಜ್ಯ ವಿಧಾನ ಪರಿಷತ್ ಸದಸ್ಯರ ವಿಳಾಸವನ್ನು ಬೆರಳಚ್ಚು ಮಾಡಿರುವುದರಿಂದ, ತಾವೇ ಖುದ್ದಾಗಿ ರಾಜ್ಯ ವಿಧಾನ ಪರಿಷತ್ ಆಪ್ತ ಸಹಾಯಕರುಗಳಿಗೆ ದೂರವಾಣಿ ಮೂಲಕ ತಿಳಿಸಿದ್ದು, ಯಾವುದೇ ರೀತಿಯ ಕರ್ತವ್ಯಲೋಪ ಎಸಗಿರುವುದಿಲ್ಲವಾದ್ದರಿಂದ ಸದರಿ ಆರೋಪವನ್ನು ಕೈಬಿಡಬೇಕೆಂದು ಕೋರಿರುತ್ತಾರೆ.
5. ದಿ:20.05.2014 ರಿಂದ ದಿ:20.06.2014 ರವರೆಗೆ ಕರ್ನಾಟಕ ವಿಧಾನ ಪರಿಷತ್ ಚುನಾವಣಾ ಮಾದರಿ ನೀತಿ ಸಂಹಿತೆಯ ಜಾರಿಯಲ್ಲಿರುತ್ತದೆ. ದಿ:06.06.2014ರಂದು ತಾಲ್ಲೂಕು ಪಂಚಾಯತ್ ಸಾಮಾನ್ಯ ಸಭೆ ನಡೆಸುವ ಬಗ್ಗೆ ತುಮಕೂರು ಚುನಾವಣಾ ಕಛೇರಿಗೆ ದೂರವಾಣಿ ಮುಖಾಂತರ ಚರ್ಚಿಸಲಾಗಿ, ಚುನಾವಣಾ ನೀತಿ ಸಂಹಿತೆಗೆ ಉಲ್ಲಂಘನೆಯಾಗದಂತೆ ಸಭೆಯನ್ನು ನಡೆಸಲು ಸೂಚಿಸಿದಂತೆ ಸಾಮಾನ್ಯ ಸಭೆಯನ್ನು ನಡೆಸಲಾಗಿದ್ದು, ಯಾವುದೇ ಕರ್ತವ್ಯಲೋಪ ಎಸಗಿರುವುದಿಲ್ಲವೆಂದು, ತುರುವೇಕೆರೆ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಅವಧಿಯಲ್ಲಿ ಸರ್ಕಾರದ ಮತ್ತು ಮೇಲಾಧಿಕಾರಿಗಳ ಆದೇಶಗಳನ್ವಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸ ಲಾಗಿದ್ದು, ಮತ್ತು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮಗಳನುಸಾರ ಸಭೆಗಳನ್ನು ಏರ್ಪಡಿಸಿ ಎಲ್ಲಾ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗಿರುತ್ತದೆ ಎಂಬ ಅಂಶಗಳನ್ನು ಅವಗಾಹನೆಗೆ ಸಲ್ಲಿಸುತ್ತಾ, ತಮ್ಮ ವಿರುದ್ಧದ ಆರೋಪಗಳಿಂದ ದೋಷಮುಕ್ತ ಮಾಡಲು ಕೋರಿರುತ್ತಾರೆ.

ಸರ್ಕಾರವು ಶ್ರೀ ಎಂ.ಕೆ.ವಾಳ್ವೇಕರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ತುರವೇಕೆರೆ ಇವರ ವಿರುದ್ಧದ ಆರೋಪಗಳು ಮತ್ತು ಸದರಿ ಅಧಿಕಾರಿಯು ದಿನಾಂಕ: 08.12.2015 ರಲ್ಲಿ ಸಲ್ಲಿಸಿರುವ ಲಿಖಿತ ಹೇಳಿಕೆಗಳನ್ನು ಪರಿಶೀಲಿಸಲಾಗಿದ್ದು, ಸದರಿ ಅಧಿಕಾರಿಯು ನೀಡಿರುವ ಪ್ರತ್ಯುತ್ತರಕ್ಕೆ ಸಂಬಂಧಿಸಿದಂತೆ ಯಾವುದೇ ಪೂರಕ ದಾಖಲೆಗಳನ್ನು ಸಲ್ಲಿಸಿರುವುದಿಲ್ಲ. ಆದರೆ, ಪ್ರಕರಣದಲ್ಲಿ ಸರ್ಕಾರಕ್ಕೆ ಯಾವುದೇ ಆರ್ಥಿಕ ನಷ್ಟ ಉಂಟಾಗಿರುವುದಿಲ್ಲ. ಆದ್ದರಿಂದ, ಸದರಿ ಅಧಿಕಾರಿಯ ಕರ್ತವ್ಯ ಲೋಪಕ್ಕೆ ಅನುಗುಣವಾಗಿ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 233 ವಿಸೇಜಿ 2014 ಬೆಂಗಳೂರು ದಿನಾಂಕ: 04-10-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಸರ್ಕಾರವು ಶ್ರೀ ಎಂ.ಕೆ.ವಾಳ್ವೇಕರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ತುರುವೇಕೆರೆ ಇವರಿಗೆ ಕ್ರಮಾಂಕ ಗ್ರಾಅಪ 233 ವಿಸೇಜಿ 2014, ದಿನಾಂಕ: 16-11-2015 ರ ಕಾರಣ ಕೇಳುವ ನೋಟೀಸಿನ ಜೊತೆ ಜಾರಿ ಮಾಡಿರುವ ಆರೋಪಗಳಿಗೆ ಸಂಬಂಧಿಸಿದಂತೆ, ಸದರಿ ಅಧಿಕಾರಿಗೆ ಆಡಳಿತಾತ್ಮಕ "ಎಚ್ಚರಿಕೆ" ನೀಡಿ ಪ್ರಕರಣವನ್ನು ಮುಕ್ತಾಯಗೊಳಿಸಲಾಗಿರುತ್ತದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

4/10/2016

(ಎಸ್. ರಂಗನಗೌಡ)
**ಸರ್ಕಾರದ ಅಧೀನ ಕಾರ್ಯದರ್ಶಿ,(ಸೇ-ಬಿ&ಸಿ)**
**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.**

ಗೆ:

1. ಮಹಾಲೇಖಪಾಲರು, (ಎ&ಇ) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು.
3. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಇವರ ಮುಖಾಂತರ).

**ಪ್ರತಿಯನ್ನು ಮಾಹಿತಿಗಾಗಿ:**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

GO